ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಐದನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 11ನೇ ಡಿಸೆಂಬರ್, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

ಆ) ದಿನಾಂಕ 10.12.2014ರ ಎರಡನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಲಕ್ಷ್ಮಣ ಸಂಗಪ್ಪ ಸವದಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 23(609) : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್.ಡಿ.ಕುಮಾರಸ್ವಾಮಿ, ವೈ.ಎಸ್.ವಿ.ದತ್ತ, ಹೆಚ್.ಡಿ.ರೇವಣ್ಣ, ಎನ್. ಚಲುವರಾಯಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ರಾಜ್ಯದಲ್ಲಿ ಕಬ್ಬು ಬೆಳೆಗಾರರಿಗೆ ಪ್ರತಿ ಟನ್ ಕಬ್ಬಿನ ದರ ರೂ 2500 ನೀಡುವುದಾಗಿ ಸರ್ಕಾರ ಹೊರಡಿಸಿರುವ ಆದೇಶವು ಜಾರಿಯಾಗದಿರುವುದರಿಂದ ಉದ್ಭವಿಸಿರುವ ಪರಿಸ್ಥಿತಿ ಬಗ್ಗೆ

ಮತ್ತು

ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್. ಅಶೋಕ್, ಗೋವಿಂದ ಎಂ. ಕಾರಜೋಳ, ವಿಶ್ವೇಶ್ವರ ಹೆಗಡೆ ಕಾಗೇರಿ, ಬಸವರಾಜ ಬೊಮ್ಮಾಯಿ ಹಾಗೂ ಇತರರು ರಾಜ್ಯದಲ್ಲಿ ಕಬ್ಬು ಬೆಳೆಗೆ ನಿಗದಿತ ಬೆಲೆ 2500ರೂ ಗಳನ್ನು ಘೋಷಣೆಯಾಗಿದ್ದರೂ ಹಲವಾರು ಸಕ್ಕರೆ ಕಾರ್ಖಾನೆಗಳು ಸದರಿ ಬೆಲೆಯನ್ನು ರೈತರಿಗೆ ಪಾವತಿಸದಿರುವ ಬಗ್ಗೆ ಹಾಗೂ ರಾಜ್ಯದಲ್ಲಿ ರೈತರು ಬೆಳೆದ ಮೆಕ್ಕೆಜೋಳ, ಹತ್ತಿ, ಈರುಳ್ಳಿ, ಭತ್ತ ಮತ್ತು ಇತರ ಬೆಳೆಗಳ ಬೆಲೆ ಕುಸಿದಿರುವುದರಿಂದ ಬೆಂಬಲ ಬೆಲೆ ಘೋಷಣೆ ಮಾಡುವ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

ಮು.ತಿ.ನೋ.,

3. ವರದಿಗಳನ್ನೊಪ್ಪಿಸುವುದು

ಶ್ರೀ ಕೆ. ಗೋಪಾಲ ಪೂಜಾರಿ (ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಮಿತಿ) ಅವರು 2014-15ನೇ ಸಾಲಿನ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಮಿತಿಯ ಏಳನೇ, ಎಂಟನೇ ಮತ್ತು ಒಂಭತ್ತನೇ ವರದಿಗಳನ್ನೊಪ್ಪಿಸುವುದು.

4. ಸಂವಿಧಾನ ತಿದ್ದುಪಡಿ ಸ್ಥಿರೀಕರಣ ನಿರ್ಣಯ

ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿ) ಅವರು ಸಂವಿಧಾನ (ಒಂದು ನೂರ ಇಪ್ಪತ್ತೊಂದನೇ ತಿದ್ದುಪಡಿ) ವಿಧೇಯಕ, 2014ನ್ನು ಸ್ಥಿರೀಕರಿಸಲು ಅಂಗೀಕರಿಸಬೇಕೆಂದು ಮಂಡಿಸುವುದು.

"ಸಂಸತ್ತಿನ ಉಭಯ ಸದನಗಳಲ್ಲಿ ಅಂಗೀಕರಿಸಲಾದ ಸಂವಿಧಾನ (ಒಂದು ನೂರ ಇಪ್ಪತ್ತೊಂದನೇ ತಿದ್ದುಪಡಿ) ವಿಧೇಯಕ, 2014ರ ಭಾರತ ಸಂವಿಧಾನದ ಅನುಚ್ಛೇದ 368ನೇ (2)ನೇ ಖಂಡದ ಪರಂತುಕದಲ್ಲಿನ (ಬಿ) ಖಂಡದ ವ್ಯಾಪ್ತಿಯೊಳಗೆ ಈ ಸದನವು ಸ್ಥಿರೀಕರಿಸುತ್ತದೆ".

5. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ಪೌರ ಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2014

ಡಾ|| ಖಮರುಲ್ ಇಸ್ಲಾಂ(ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಪೌರ ಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ತುಕಾರಾಂ. ಈ ಅವರು ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ಅಧೀನ ಸಂಸ್ಥೆಯಾದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ ಕಳೆದ 10-11 ವರ್ಷಗಳಿಂದ ನಡೆಸಲಾಗುತ್ತಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಪ್ರಾಂಶುಪಾಲರಾಗಿ/ಶಿಕ್ಷಕರಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

2. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆಯ, ಮಡಿಕೇರಿ ತಾಲ್ಲೂಕು, ಕುಂಜಿಲ ಪಂಚಾಯತ್ ವ್ಯಾಪ್ತಿಯ ಗ್ರಾಮಗಳಾದ ನಾಲಡಿ, ಯಮಕಪಾಡಿ, ಪಾಲಂಗಾಲ ಗ್ರಾಮಗಳ ವ್ಯಾಪ್ತಿಯಲ್ಲಿನ ಏಲಕ್ಕಿ ಮಲೆಯ ಜಾಗವನ್ನು ಅರಣ್ಯ ಇಲಾಖೆಯ ವಶಕ್ಕೆ ಬಿಟ್ಟು ಕೊಡುವ ಹಾಗೂ ಇದಕ್ಕೆ ಪರಿಹಾರ ಕೋರಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.
3. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಕಳಸ ಪಟ್ಟಣಕ್ಕೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು NRDWP ಯೋಜನೆ ಅಡಿಯಲ್ಲಿನ ಕಾಮಗಾರಿಯು ಪೂರ್ಣಗೊಳ್ಳದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
4. ಶ್ರೀ ಎನ್. ಚಲುವರಾಯ ಸ್ವಾಮಿ ಅವರು ಬೆಂಗಳೂರು ಮಹಾನಗರದ ಹೊರವರ್ತುಲ ಬಿ.ಎಂ.ಐ.ಸಿ ನೈಸ್ ರಸ್ತೆಯನ್ನು ಒಪ್ಪಂದದ ರೀತ್ಯಾ ಸಿಮೆಂಟ್ ರಸ್ತೆಯನ್ನು ನಿರ್ಮಿಸದಿರುವುದು ಹಾಗೂ ಈ ರಸ್ತೆಯಲ್ಲಿ ಸಂಚರಿಸುವ ವಾಹನಗಳಿಂದ ಹೆಚ್ಚಿನ ಟೋಲ್ ಹಣವನ್ನು ವಸೂಲಿ ಮಾಡುತ್ತಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.
5. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಹೋಬಳಿ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.
6. ಶ್ರೀ ಮಂಜುನಾಥ ಗೌಡ ಕೆ.ಎಸ್. ಅವರು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ಕಾಚರಕನಹಳ್ಳಿ ಮತ್ತು ಕೋಡಿಹಳ್ಳಿ ಏತ ನೀರಾವರಿ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸದಿರುವುದರಿಂದ ಆ ಭಾಗದ ರೈತರುಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.
7. ಶ್ರೀ ಗೋವಿಂದ ಎಂ. ಕಾರಜೋಳ ಅವರು ವಿಜಯಪುರ ಜಿಲ್ಲೆ ಮತ್ತು ತಾಲ್ಲೂಕಿನ ಮಕಣಾಪುರ ಗ್ರಾಮದ ಹಲವು ದಲಿತ ಕುಟುಂಬದವರನ್ನು ಒಕ್ಕಲೆಬ್ಬಿಸಿ, ವಶಪಡಿಸಿಕೊಂಡಿರುವ ಜಮೀನನ್ನು ಅವರಿಗೆ ಹಿಂದಿರುಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.
8. ಶ್ರೀಮತಿ ವಿನಿಶಾ ನೆರೊ ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಹೊಸದಾಗಿ ನಿರ್ಮಿಸಿರುವ ಮೇಲ್‌ಸೇತುವೆಗಳ ಕೆಳಭಾಗದ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ನಿರ್ವಹಿಸದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.
9. ಶ್ರೀ ಪ್ರಸನ್ನಕುಮಾರ್ ಕೆ.ಬಿ. ಅವರು ಶಿವಮೊಗ್ಗ ತಾಲ್ಲೂಕಿನ ಸರ್ವೆ ನಂ.1 ರಲ್ಲಿ ೬೦೦ಎಕರೆ ಪ್ರದೇಶದಲ್ಲಿ ಉಳಿದಿರುವ ೪೦೪ ಎಕರೆ ಖಾಲಿ ಪ್ರದೇಶದಲ್ಲಿ ಕೈಗಾರಿಕೋದ್ಯಮಿಗಳಿಗೆ ಅನುಕೂಲವಾಗುವಂತೆ ೨೫೦ ಎಕರೆ ಪ್ರದೇಶವನ್ನು "S.E.Z" "ಕೈಗಾರಿಕಾ ವಸಾಹತು"ವನ್ನಾಗಿ ಮೀಸಲಿರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಮು.ತಿ.ನೋ.,

10. ಶ್ರೀ ಬಿ.ಬಿ.ನಿಂಗಯ್ಯ ಅವರು ಕಡೂರು- ಮಂಗಳೂರು ರಸ್ತೆಯನ್ನು ಸಂಪರ್ಕಿಸುವ ಬಂಕೇನಹಳ್ಳಿ-ಬಗ್ಗಸಗೋಡು ರಸ್ತೆಯ ಮಧ್ಯೆ ಹರಿಯುವ ಹೇಮಾವತಿ ನದಿಗೆ ನಿರ್ಮಿಸಲಾಗಿದ್ದ ಸೇತುವೆಯು ಹೆಚ್ಚಿನ ಮಳೆಯಿಂದಾಗಿ ಕುಸಿದಿರುವುದರಿಂದ ಸಾರ್ವಜನನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

11. ಶ್ರೀ ಪಿ. ರಾಜೀವ್ ಅವರು ಬೆಳಗಾವಿ ಜಿಲ್ಲೆ ನಗರಾಭಿವೃದ್ಧಿ ಪ್ರಾಧಿಕಾರವು ಹೊರಡಿಸಿರುವ ನಕಾಶೆಯಲ್ಲಿ ಸುಮಾರು ೩೩ ಸಾವಿರ ಎಕರೆ ಫಲವತ್ತಾದ ನೀರಾವರಿ ಭೂಮಿಯನ್ನು ಖರಾಬು ಭೂಮಿ ಎಂದು ನಮೂದಿಸಿರುವುದರ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

12. ಶ್ರೀಯುತರುಗಳಾದ ಹೆಚ್.ಸಿ. ಬಾಲಕೃಷ್ಣ ಮತ್ತು ಹೆಚ್.ಡಿ. ರೇವಣ್ಣ ಅವರುಗಳು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ, ಹೊಳೆನರಸೀಪುರ ಮತ್ತು ಹಾಸನ ತಾಲ್ಲೂಕುಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಿರುವುದರಿಂದ ೩೫೩ ಕೊಳವೆ ಬಾವಿ ಕಾಮಗಾರಿಗಳಿಗೆ ಅನುಮೋದನೆ ನೀಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

13. ಶ್ರೀಯುತರುಗಳಾದ ಮಧು ಎಸ್. ಬಂಗಾರಪ್ಪ, ವೈ.ಎಸ್.ವಿ.ದತ್ತಾ, ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಸುಧಾಕರ್‌ಲಾಲ್ ಮತ್ತು ಇತರರು ರಾಜ್ಯದಲ್ಲಿ ಜಿಲ್ಲಾ ಪಂಚಾಯತ್‌ಗಳ ಮೂಲಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆಯನ್ನು ಕಾರ್ಯಗತ ಮಾಡುತ್ತಿದ್ದು, ಇದಕ್ಕೆ ಸಂಬಂಧಪಟ್ಟಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ ಆಯಾ ಕ್ಷೇತ್ರದ ಶಾಸಕರ ಅನುಮೋದನೆಯನ್ನು ಪಡೆಯದೆ ಅನುದಾನವನ್ನು ದುರ್ಬಳಕೆ ಮಾಡುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

14. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಎನ್. ಚಲುವರಾಯಸ್ವಾಮಿ, ಎ.ಬಿ.ರಮೇಶ್ ಬಂಡಿಸಿದ್ದೇಗೌಡ ಹಾಗೂ ಇತರರು ರಾಜ್ಯದಲ್ಲಿ ರೈತರು ಬೆಳೆದ ಭತ್ತಕ್ಕೆ ಸರಿಯಾದ ಬೆಲೆ ಸಿಗದಿರುವುದರಿಂದ ರೈತರಿಗೆ ನಷ್ಟವುಂಟಾಗುತ್ತಿರುವ ವಿಷಯದ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

15. ಶ್ರೀ ಎಸ್.ಆರ್.ವಿಶ್ವನಾಥ ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 18 ಕಿ.ಮೀ ವ್ಯಾಪ್ತಿಯಲ್ಲಿರುವ ಸರ್ಕಾರಿ ಭೂಮಿಯಲ್ಲಿ ಕಟ್ಟಿರುವ ಮನೆಗಳನ್ನು ಭೂ ಸುಧಾರಣಾ ಕಾಯ್ದೆಯ ಕಲಂ ೯೪ ಸಿ ರಡಿ ಸಕ್ರಮಗೊಳಿಸುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.

7. ನಿಯಮ ೬೯ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ, ಕೆ.ಜಿ.ಬೋಪಯ್ಯ, ಸಿ.ಟಿ.ರವಿ, ವಿ.ಸುನೀಲ್‌ಕುಮಾರ್ ಹಾಗೂ ಇತರರು ಪಶ್ಚಿಮ ಘಟ್ಟಗಳ ಸಂರಕ್ಷಣೆ ಕುರಿತು ಡಾ॥ ಕಸ್ತೂರಿ ರಂಗನ್ ನೀಡಿರುವ ವರದಿ ಅನುಷ್ಠಾನದಿಂದಾಗಿ ಪಶ್ಚಿಮ ಘಟ್ಟಗಳಿಗೆ ಹೊಂದಿಕೊಂಡಿರುವ ಜಿಲ್ಲೆಗಳ ಜನರಿಗೆ ಅನ್ಯಾಯವಾಗದಂತೆ ಅವರನ್ನು ಒಕ್ಕಲೆಬ್ಬಿಸದಂತೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಚರ್ಚೆ.

ಮು.ತಿ.ನೋ.,

೮. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಹೆಚ್.ಡಿ.ರೇವಣ್ಣ ಅವರು "ನಕಲಿ ದಾಖಲೆಗಳನ್ನು ನೀಡಿರುವ ಗುತ್ತಿಗೆದಾರರ ವಿರುದ್ಧ ಕ್ರಮ" ಬಗ್ಗೆ ದಿನಾಂಕ:09.12.2014ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 01(158)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)